**All India Radio: Bangalore**
**Regional Bulletin In Kannada**
**22.01.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.01.2025 / 6.40 p.m.**
**<><><><>**

ಮುಖ್ಯಾಂಶಗಳು

1. ಬಾಣಂತಿಯರ ಸಾವು ಪ್ರಕರಣ- ನಿಯಂತ್ರಣಕ್ಕೆ ಆರೋಗ್ಯ ಇಲಾಖೆಯಿಂದ ಜಾಗೃತಿ ಅಭಿಯಾನ
2. ಬೇಸಿಗೆಯಲ್ಲಿ ಲೋಡ್ ಶೆಡ್ಡಿಂಗ್ ಇಲ್ಲ - ತೋಟದ ಮನೆಗಳಿಗೂ ನಿರಂತರ ಜ್ಯೋತಿ ಸಂಪರ್ಕಕ್ಕೆ ಕ್ರಮ - ಇಂಧನ ಸಚಿವ ಕೆ ಜೆ ಜಾರ್ಜ್
3. ಶಿವಮೊಗ್ಗ ಜಿಲ್ಲೆಯ ಆಕಾಶವಾಣಿ ಕೇಂದ್ರದ ಎಫ್‌ಎಂ ಟ್ರಾನ್ಸ್‌ಮೀಟರ್ ನಾಳೆ ಕೇಂದ್ರ ಸಚಿವ ಡಾ.ಎಲ್.ಮುರುಗನ್ ಲೋಕಾರ್ಪಣೆ
4. ಉತ್ತರಕನ್ನಡ ಯಲ್ಲಾಪುರ ಅಪಘಾತದಲ್ಲಿ ೧೦ ಮಂದಿ ಸಾವು; ಪ್ರಧಾನಿ ಮೋದಿ ಸಂತಾಪ; ಕುಟುಂಬಸ್ಥರಿಗೆ ೨ ಲಕ್ಷ ಪರಿಹಾರ ಘೋಷಣೆ
5. ಕಾಂಗ್ರೆಸ್ ಪಕ್ಷದ ಒಳಜಗಳದಿಂದಾಗಿ ದಾವೋಸ್‌ನಲ್ಲಿ ಕರ್ನಾಟಕಕ್ಕೆ ಪ್ರಾತಿನಿಧ್ಯವಿಲ್ಲ - ಪ್ರತಿಪಕ್ಷ ನಾಯಕ ಆರ್.ಅಶೋಕ ಗಂಭೀರ ಆರೋಪ

<><><><>

ಬಾಣಂತಿಯರ ಸಾವು ಪ್ರಕರಣಗಳನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಇನ್ನು ಮುಂದೆ ನಿಯಮಿತವಾಗಿ ಆರೋಗ್ಯ ತಪಾಸಣೆ, ಸಕಾಲಕ್ಕೆ ಚಿಕಿತ್ಸೆ ಮತ್ತು ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ರಾಯಚೂರಿನಲ್ಲಿ ಮಾತೃತ್ವ ಸುರಕ್ಷಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ಮೂಲಕ ತಾಯಂದಿರ ಸಾವಿನ ಪ್ರಕರಣಗಳು ವರದಿಯಾಗದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು ಎಂದು ಹೇಳಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಸೇರಿದಂತೆ ಎಲ್ಲಾ ಕಡೆಗೆ ಆದ್ಯತೆಯ ಮೇರೆಗೆ ಈ ಅಭಿಯಾನ ಕೈಗೊಳ್ಳಲಾಗುವುದು. ಆಶಾ

ಕಾರ್ಯಕರ್ತೆಯರಿಗೆ ಏಪ್ರಿಲ್ ತಿಂಗಳಿನಿಂದ ಕನಿಷ್ಠ ೧೦ ಸಾವಿರ ರೂಪಾಯಿ ವೇತನ ನಿಗದಿ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಬೇಸಿಗೆಯಲ್ಲಿ ಈ ಬಾರಿ ಲೋಡ್ ಶೆಡ್ಡಿಂಗ್ ಮಾಡುವುದಿಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ಬಾಗಲಕೋಟೆಯಲ್ಲಿ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ನಡೆದ ಇಂಧನ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ತೋಟದಲ್ಲಿರುವ ಮನೆಗಳಿಗೂ ನಿರಂತರ ಜ್ಯೋತಿ ಸಂಪರ್ಕ ಕಲ್ಪಿಸಲಾಗುವುದು ಎಂದು ತಿಳಿಸಿದ್ದಾರೆ. ಈ ಭಾಗದಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯಿಂದ ಮುಳುಗಡೆಗೊಂಡ ಸಂತ್ರಸ್ತರು ತಮ್ಮ ತೋಟದ ಮನೆಗಳಲ್ಲಿ ವಾಸ ಮಾಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಕ್ರಮವಹಿಸಲಾಗುವುದೆಂದು ಭರವಸೆ ನೀಡಿದ್ದಾರೆ.

<><><>

ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರದ ಬಳಿ ಇಂದು ಬೆಳಗ್ಗೆ ತರಕಾರಿ ಸಾಗಿಸುತ್ತಿದ್ದ ಲಾರಿ ಪಲ್ಟಿಯಾಗಿ ಸ್ಥಳದಲ್ಲೇ ಹಾವೇರಿಯ ಸವಣೂರಿನ ೧೦ ಮಂದಿ ಸಾವನ್ನಪ್ಪಿದ್ದಾರೆ. ಘಟನೆಗೆ ಪ್ರಧಾನಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದಾರೆ. ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತಪಟ್ಟವರ ಕುಟುಂಬಸ್ಥರಿಗೆ ೨ ಲಕ್ಷ ರೂಪಾಯಿ ಪರಿಹಾರ ನೀಡುವುದಾಗಿ ಘೋಷಿಸಿದ್ದಾರೆ. ಕರ್ನಾಟಕದ ಉತ್ತರ ಕನ್ನಡ ಜಿಲ್ಲೆಯಲ್ಲಿ ಸಂಭವಿಸಿದ ಅಪಘಾತದಲ್ಲಿ ಜೀವಹಾನಿಯಿಂದ ತೀವ್ರ ದುಃಖಿತನಾಗಿದ್ದೇನೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ ಸೂಚಿಸುತ್ತೇನೆ. ಗಾಯಾಳುಗಳು ಬೇಗ ಗುಣಮುಖರಾಗಲಿ. ಸ್ಥಳೀಯ ಆಡಳಿತವು ಸಂತ್ರಸ್ತರಿಗೆ ಸಹಾಯ ಮಾಡುತ್ತಿದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಮಾಡಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ಯಲ್ಲಾಪುರದ ಅಪಘಾತಕ್ಕೆ ಸಂತಾಪ ಸೂಚಿಸಿದ್ದಾರೆ. ಅಪಘಾತದಲ್ಲಿ ಗಾಯಗೊಂಡವರು ಶೀಘ್ರವಾಗಿ ಗುಣಮುಖರಾಗಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಯಲ್ಲಾಪುರ ಅಪಘಾತದಲ್ಲಿ ಮೃತಪಟ್ಟವರ ಕುಟುಂಬಕ್ಕೆ ೩ ಲಕ್ಷ ರೂಪಾಯಿ ಪರಿಹಾರ ನೀಡುವುದಾಗಿ ಘೋಷಿಸಿದ್ದಾರೆ.

<><><><>

ಶಿವಮೊಗ್ಗ ಜಿಲ್ಲೆಯ ಭದ್ರಾವತಿ ಆಕಾಶವಾಣಿ ಕೇಂದ್ರದ ಸಾಮರ್ಥ್ಯ ಹೆಚ್ಚಿಸಲು ಕೇಂದ್ರ ಸರ್ಕಾರ ಮುಂದಾಗಿದ್ದು, ಈಗ ಇರುವ ಮೀಡಿಯಂ ವೇವ್, ಫ್ರೀಕ್ವೆನ್ಸಿ ಮಾಡ್ಯುಲೇಷನ್ ಟ್ರಾನ್ಸ್ ಮಿಷನ್ ಗೆ ಅಂದರೆ ಎಫ್.ಎಂಗೆ ಬದಲಾಗುತ್ತಿದೆ. ಕೇಂದ್ರದ ಮಾಹಿತಿ ಮತ್ತು ಪ್ರಸರಣ ಸಚಿವಾಲಯ ೧೦ ಕೋಟಿ ವೆಚ್ಚದಲ್ಲಿ ೧೦ ಕಿಲೋ ವ್ಯಾಟ್ ಸಾಮರ್ಥ್ಯದ ಟ್ರಾನ್ಸ್‌ಮೀಟರ್ ಅಳವಡಿಸಲು ಮುಂದಾಗಿದೆ. ಈಗಾಗಲೇ ಕೆನಡಾದಿಂದ ೧೦ ಕಿಲೋವ್ಯಾಟ್ ಸಾಮರ್ಥ್ಯದ ಟ್ರಾನ್ಸ್ ಮೀಟರ್ ಶಿವಮೊಗ್ಗಕ್ಕೆ ಆಗಮಿಸಿದೆ. ಕೇಂದ್ರದ ಮಾಹಿತಿ ಮತ್ತು ಪ್ರಸರಣಾ ಖಾತೆ ರಾಜ್ಯ ಸಚಿವ ಡಾ: ಎಲ್ ಮುರುಗನ್ ನಾಳೆ ಶಿವಮೊಗ್ಗ ದೂರದರ್ಶನ ಕೇಂದ್ರದಲ್ಲಿ ಟ್ರಾನ್ಸ್‌ಮೀಟರ್‌ಗೆ ಪೂಜೆ ಸಲ್ಲಿಸಲಿದ್ದಾರೆ. ಬಳಿಕ ಅವರು, ಶಿವಮೊಗ್ಗದಲ್ಲಿ ಸಂವಿಧಾನ್ ಗೌರವ್ ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><><>

ಕೃಷಿ ಸದೃಢವಾಗಿದ್ದರೆ ದೇಶ ಸದೃಢವಾಗಿರುತ್ತದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಶಿವಮೊಗ್ಗದ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಆಯೋಜಿಸಿದ್ದ ವಿಶ್ವವಿದ್ಯಾಲಯದ ೯ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ಕೃಷಿ ಮತ್ತು ತೋಟಗಾರಿಕೆ ಪದವೀಧರರು, ವಿದ್ಯಾರ್ಥಿಗಳು ರೈತರಿಗೆ ಲಾಭದಾಯಕವಾದ, ಪರಿಸರಕ್ಕೆ ಪೂರಕವಾದ ಕೃಷಿ ಸಂಶೋಧನೆಗಳನ್ನು ಕೈಗೊಂಡು ಕೊಡುಗೆ ನೀಡಬೇಕೆಂದು ಕರೆ ನೀಡಿದ್ದಾರೆ. ಘಟಿಕೋತ್ಸವದಲ್ಲಿ ಅತ್ಯುತ್ತಮ ಶೈಕ್ಷಣಿಕ ಸಾಧನೆ ಮಾಡಿದ ೧೭ ಪದವಿ ವಿದ್ಯಾರ್ಥಿಗಳು ಚಿನ್ನದ ಪದಕಕ್ಕೆ ಬಾಜನರಾಗಿದ್ದಾರೆ. ಅವರಿಗೆ ಒಟ್ಟು ೩೧ ಚಿನ್ನದ ಪದಕಗಳನ್ನು ನೀಡಲಾಯಿತು. ಘಟಿಕೋತ್ಸವದಲ್ಲಿ ಒಟ್ಟು ೯೯೪ ಅಭ್ಯರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

<><><><>

ಪಕ್ಷದಲ್ಲಿನ ಒಳಜಗಳದಿಂದಾಗಿ ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ನಡೆಯುತ್ತಿರುವ ವಿಶ್ವ ಆರ್ಥಿಕ ವೇದಿಕೆಯಲ್ಲಿ ಕರ್ನಾಟಕಕ್ಕೆ ಪ್ರಾತಿನಿಧ್ಯವಿಲ್ಲ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್ ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು ಪ್ರಮುಖ ರಾಜ್ಯಗಳ ಮುಖ್ಯಮಂತ್ರಿಗಳು ದಾವೋಸ್‌ನಲ್ಲಿದ್ದು ಹೂಡಿಕೆ ಕುರಿತಂತೆ ಒಪ್ಪಂದಗಳನ್ನು ಮಾಡುತ್ತಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ  ಸಂಪುಟ ಸಹೋದ್ಯೋಗಿಗಳು ಈ ಬಗ್ಗೆ ಆಸಕ್ತಿ ಹೊಂದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ಪಕ್ಷದ ಒಳಜಗಳ ರಾಜ್ಯದ ಆರ್ಥಿಕತೆ ಮತ್ತು ಆಡಳಿತವನ್ನು ಸಂಪೂರ್ಣವಾಗಿ ಸ್ತಬ್ಧಗೊಳಿಸಿದೆ ಎಂದು ಆರೋಪಿಸಿದ್ದಾರೆ.

<><><><>

ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ನೇತೃತ್ವದಲ್ಲಿ ಮಂಡ್ಯ ಜಿಲ್ಲೆಯ ಶಾಸಕರು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಅಭಿನಂದನೆ ಸಲ್ಲಿಸಿದರು. ಸಚಿವ ಸಂಪುಟದಲ್ಲಿ ಮಂಡ್ಯದಲ್ಲಿ ಕೃಷಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಸರ್ಕಾರ ಅನುಮೋದನೆ ನೀಡಿರುವುದು ಹಾಗೂ ಸರ್ಕಾರಿ ಸ್ವಾಮ್ಯದ ಮೈಸೂರು ಸಕ್ಕರೆ ಕಾರ್ಖಾನೆ ಕಳೆದ ೧೪ ವರ್ಷಗಳಿಂದ ಬಾಕಿ ಉಳಿಸಿಕೊಂಡಿದ್ದ ವಿದ್ಯುತ್ ಬಿಲ್ ೫೨ ಕೋಟಿ  ರೂಪಾಯಿ ಮನ್ನಾ ಮಾಡಿರುವ ಹಿನ್ನಲೆಯಲ್ಲಿ ಅಭಿನಂದನೆ ಸಲ್ಲಿಸಿದ್ದಾರೆ.  ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉಪಸ್ಥಿತರಿದ್ದರು.

<><><><>

ಸಮಗ್ರ ದತ್ತಾಂಶ ಸಂಗ್ರಹದೊಂದಿಗೆ ಕಲ್ಯಾಣ ಕರ್ನಾಟಕದ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಪೂರವಾಗುವಂತಹ  ಕಾರ್ಯಕ್ರಮಗಳನ್ನು ರೂಪಿಸುವ ಅವಶ್ಯಕತೆಯಿದೆ ಎಂದು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗದ ಅಧ್ಯಕ್ಷ ಪ್ರೊಫೆಸರ್ ಗೋವಿಂದರಾವ್ ಹಾಗೂ ಆಯೋಗದ ಸದಸ್ಯರು ಇಂದು ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿ ಮಾಡಿ ಚರ್ಚಿಸಿದರು. ಈ ವೇಳೆ, ಕಲ್ಯಾಣ ಕರ್ನಾಟಕ ಭಾಗದಲ್ಲಿ ೩೭೧ ಜೆ ಜಾರಿಗೊಂಡ ಒಂದು ದಶಕದ ಅವಧಿಯಲ್ಲಿ ಶಿಕ್ಷಣ ಕೇತ್ರದಲ್ಲಿ ಸಾಕಷ್ಟು ಸುಧಾರಣೆಗಳಾಗಿವೆ, ಎಂಜಿನಿಯರಿಂಗ್, ಮೆಡಿಕಲ್ ಕಾಲೇಜುಗಳಲ್ಲಿ ಕಲ್ಯಾಣ ಕರ್ನಾಟಕದ ಬಹುತೇಕ ವಿದ್ಯಾರ್ಥಿಗಳು ಪ್ರವೇಶಾವಕಾಶ ಪಡೆದಿದ್ದಾರೆ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಈ ಭಾಗದ ಜನರು ತೇರ್ಗಡೆಯಾಗಿ ಉದ್ಯೋಗಾವಕಾಶ ಹೊಂದಿದ್ದಾರೆ. ಆದಾಗ್ಯೂ ಬೇರೆ ಬೇರೆ ಕ್ಷೇತ್ರಗಳಲ್ಲಿನ ಅಸಮತೋಲನವನ್ನು ಸರಿಹೊಂದಿಸುವ ಅನಿವಾರ್ಯತೆ ಇದೆ ಸಚಿವ ಪ್ರಿಯಾಂಕ್ ಖರ್ಗೆ ಆಯೋಗಕ್ಕೆ ಮಾಹಿತಿ ನೀಡಿದ್ದಾರೆ.

<><><><>

ರಾಸಾಯನಿಕಗಳನ್ನು ಹೊಂದಿರುವ ಗೊಬ್ಬರದ ಅತಿಯಾದ ಬಳಕೆಯಿಂದಾಗಿ ಭೂಮಿಯಲ್ಲಿ ಎರೆಹುಳು ಸೇರಿದಂತೆ ಎಲ್ಲ ಜೀವಿಗಳು ನಾಶವಾಗುತ್ತಿದ್ದು, ಆಧುನಿಕತೆಯಿಂದಾಗಿ ಕೃಷಿ ವ್ಯವಸ್ಥೆ ಸಂಪೂರ್ಣ ಹಾಳಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಕಳವಳ ವ್ಯಕ್ತಪಡಿಸಿದ್ದಾರೆ. ತುಮಕೂರಿನ ಶಿರಾದಲ್ಲಿ ಸ್ಪಟಿಕಪುರಿ ಮಹಾಸಂಸ್ಥಾನದ ಸಹಯೋಗದಲ್ಲಿ ಕೃಷಿ ಇಲಾಖೆ ಹಮ್ಮಿಕೊಂಡಿದ್ದ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಚೀನಾದಲ್ಲಿ ಮಣ್ಣಿನ ಫಲವತ್ತತೆಗಾಗಿ ಈಗ ಏಡಿಗಳನ್ನು ಬಳಸಲಾಗುತ್ತಿದೆ. ಕೃಷಿ ತಜ್ಞರು, ವಿಜ್ಞಾನಿಗಳು ಹಾಗೂ ಸರ್ಕಾರ ಈ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದ್ದಾರೆ.

<><><><>

ಕರ್ನಾಟಕದ ಹಲವೆಡೆ ಕಾಫಿ ನವೋದ್ಯಮಕ್ಕೆ ಅವಕಾಶಗಳನ್ನು ಸೃಷ್ಟಿಸಿ, ಸ್ವ-ಸಹಾಯ ಗುಂಪುಗಳ ಸುಮಾರು ಒಂದು ಲಕ್ಷ ಮಹಿಳಾ ಸದಸ್ಯರಿಗೆ ಕಾಫಿ ತಯಾರಿಕೆ ತಂತ್ರಜ್ಞಾನ ಮತ್ತು, ಕೌಶಲ್ಯವನ್ನು ಕಲ್ಪಿಸುವ ಸಲುವಾಗಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ವಿಶೇಷ ಫಿಲ್ಟರ್ ಕಾಫಿ ಕೆಫೆಗಳನ್ನು ಪ್ರಾರಂಭಿಸಲು ನಿರ್ಧರಿಸಲಾಗಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಜೀವನೋಪಾಯ ಮತ್ತು ಭಾರತೀಯ ಕಾಫಿ ಮಂಡಳಿಯ ನಡುವೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಭಾರತೀಯ ಕಾಫಿ ಮಂಡಳಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಜಿ.ಕೆ ಜಗದೀಶ್, ರಾಷ್ಟ್ರೀಯ ಜೀವನೋಪಾಯ ಅಭಿಯಾನ ಕರ್ನಾಟಕ ನಿರ್ದೇಶಕರಾದ, ಶ್ರೀವಿದ್ಯಾ ಒಪ್ಪಂದಕ್ಕೆ ಸಹಿ ಹಾಕಿದರು. ಡಾ. ಜಿ.ಕೆ ಜಗದೀಶ್, ಮಾತನಾಡಿ ಈ ಮಹತ್ವದ ಯೋಜನೆ ರಾಜ್ಯಾದ್ಯಂತ ಕಾಫಿ ನವೋದ್ಯಮವನ್ನು ಉತ್ತೇಜಿಸಲು ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದರು.

<><><><>

ಚಿಕ್ಕಮಗಳೂರು ನಗರದಲ್ಲಿ ಈ ತಿಂಗಳ ೨೯ ರಂದು ಕೇಂದ್ರ ಪುರಸ್ಕೃತ ಯೋಜನೆಗಳ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಉಡುಪಿ- ಚಿಕ್ಕಮಗಳೂರು ಸಂಸದರಾದ ಕೋಟಾ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಕಾರ್ಯಕ್ರಮದ ಪೂರ್ವಬಾವಿ ಸಭೆ ನಡೆಸಿದ ಬಳಿಕ ಮಾತಾನಾಡಿದ ಅವರು, ಈ ಕಾರ್ಯಗಾರದ ಉದ್ಘಾಟನೆಗೆ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಅವರನ್ನು ಆಹ್ವಾನಿಸಲಾಗಿದೆ ಎಂದು ಹೇಳಿದ್ದಾರೆ.

<><><><>

ಮನುಷ್ಯರಿಗೆ ಉತ್ತಮ ಜೀವನ ರೂಪಿಸಲು ಕಾನೂನುಗಳು ರಚನೆ ಮಾಡಲಾಗಿದ್ದು, ಜನರ ಮೂಳಭೂತ ಹಕ್ಕುಗಳ ರಕ್ಷಣೆಯಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆ ಕ್ರಿಯಾಶೀಲವಾಗಿದೆ ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಚಿತ್ರದುರ್ಗದಲ್ಲಿ ಹೇಳಿದ್ದಾರೆ. ಸರ್ಕಾರಿ ಅಧಿಕಾರಿಗಳಿಗೆ ತೊಂದರೆ ಕೊಡಬೇಕು ಎಂಬ ದುರುದ್ದೇಶದಿಂದ ಆಧಾರರಹಿತ ಹಾಗೂ ದಾಖಲೆ ರಹಿತ ಸುಳ್ಳು ದೂರನ್ನು ಲೋಕಾಯುಕ್ತಕ್ಕೆ ನೀಡಿದಲ್ಲಿ ದೂರುದಾರರ ಮೇಲೂ ಕ್ರಮ ಕೈಗೊಳ್ಳಲಾಗುವುದು. ಕಾನೂನಿನನ್ವಯ ಕನಿಷ್ಟ ೬ ತಿಂಗಳ ಜೈಲುಶಿಕ್ಷೆ ವಿಧಿಸಲು ಅವಕಾಶವಿದ್ದು, ನ್ಯಾಯಾಂಗ ನಿಂದನೆ ಎಂದು ಪರಿಗಣಿಸಿ, ಕ್ರಿಮಿನಲ್ ಕೇಸ್ ದಾಖಲಿಸಿ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ. ಹೀಗಾಗಿ ದೂರುದಾರರು ಕೂಡ ಎಚ್ಚರಿಕೆ ವಹಿಸಬೇಕು. ನ್ಯಾಯಾಲಯ ವ್ಯಾಪ್ತಿಗೆ ಬರುವಂತಹ ಪ್ರಕರಣಗಳನ್ನು ಲೋಕಾಯುಕ್ತ ವಿಚಾರಣೆ ನಡೆಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ದಕ್ಷಿಣ ಕನ್ನಡ ಜಿಲ್ಲಾ ತೋಟಗಾರಿಕೆ ಇಲಾಖೆ ವತಿಯಿಂದ ನಾಳೆಯಿಂದ ಇದೇ ೧೬ರವರೆಗೆ ಆಯೋಜನೆಗೊಂಡಿರುವ ಫಲಪುಷ್ಪ ಪ್ರದರ್ಶನಕ್ಕೆ ಮಂಗಳೂರಿನ ಕದ್ರಿ ಉದ್ಯಾನವನ ಸಜ್ಜುಗೊಂಡಿದ್ದು. ನಾಳೆ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಚಾಲನೆ ನೀಡಲಿದ್ದಾರೆ.
2. ವಿಜಯಪುರದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಂಜೀವಿನಿ- ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದ ವತಿಯಿಂದ ಬ್ಯಾಂಕ್ ವ್ಯವಸ್ಥಾಪಕರ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>